**All India Radio: Bangalore**
**Regional Bulletin In Kannada**
**05.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.11.2025 / 6.40 p.m.**
*******************

ಮುಖ್ಯಾಂಶಗಳು

೧. ರಾಜ್ಯದ ಹಲವೆಡೆ ಕಬ್ಬು ಬೆಳೆಗಾರರ ಪ್ರತಿಭಟನೆ ; ನಾಳಿನ ಸಂಪುಟ ಸಭೆಯಲ್ಲಿ ಚರ್ಚೆ - ಸಚಿವ ಎಂ.ಬಿ. ಪಾಟೀಲ್ ಭರವಸೆ

೨. ನಂದಿನಿ ತುಪ್ಪದ ದರ ಕೆ.ಜಿ.ಗೆ ೯೦ ರೂಪಾಯಿ ಏರಿಕೆ ಮಾಡಿದ ಕೆಎಂಎಫ್

೩. ರಾಜ್ಯ ಕಾನೂನು ವಿಶ್ವವಿದ್ಯಾಲಯದ ೭ನೇ ಘಟಿಕೋತ್ಸವ-ಆಂಧ್ರ ರಾಜ್ಯಪಾಲ ಎಸ್.ಅಬ್ದುಲ್ ನಜೀರ್ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ

೪. ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆ ಅಂತಿಮ ವೇಳಾಪಟ್ಟಿ ಪ್ರಕಟ

೫. ಬಾಗಲಕೋಟೆಯ ತಿಮ್ಮಾಪುರದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಶಾಸಕ ಹೆಚ್.ವೈ. ಮೇಟಿ ಅಂತ್ಯ ಸಂಸ್ಕಾರ

***************

ಪ್ರತಿ ಟನ್ ಕಬ್ಬಿಗೆ ಸಕ್ಕರೆ ಕಾರ್ಖಾನೆಗಳು ೩ ಸಾವಿರದ ೫೦೦ ರೂಪಾಯಿ ನೀಡಲೇಬೇಕು ಎಂದು ಆಗ್ರಹಿಸಿ ರಾಜ್ಯದ ಹಲವೆಡೆ ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುತ್ತಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ರೈತರು ನಡೆಸುತ್ತಿರುವ ಪ್ರತಿಭಟನೆ ಏಳನೇ ದಿನವಾದ ಇಂದೂ ಮುಂದುವರೆದಿದೆ.

ಮೂಡಲಗಿ ಸಮೀಪದ ಗುರ್ಲಾಪುರ ಹೆದ್ದಾರಿಯಲ್ಲಿ ನಡೆಸುತ್ತಿರುವ ಪ್ರತಿಭಟನೆಯಲ್ಲಿ ಸಾವಿರಾರು ರೈತರು ಪಾಲ್ಗೊಂಡಿದ್ದಾರೆ.

ಈ ಮಧ್ಯೆ ಇಂದು ರೈತರ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿ ರಾಯಬಾಗ ಬಂದ್‌ಗೆ ಕರೆ ನೀಡಲಾಗಿದೆ. ಬಂದ್‌ಗೆ ಪೂರ್ಣ ಪ್ರಮಾಣದ ಬೆಂಬಲ ವ್ಯಕ್ತವಾಗಿದ್ದು ವ್ಯಾಪಾರಸ್ಥರು ಅಂಗಡಿ ಮುಂಗಟ್ಟುಗಳನ್ನು ಮುಚ್ಚಿದ್ದರು.

***************

ಸರ್ಕಾರ ಕಬ್ಬು ಬೆಳೆಗಾರರ ಹಿತ ಕಾಪಾಡಲು ಬದ್ಧವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಡಾ. ಎಂ.ಬಿ ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

ವಿಜಯಪುರದಲ್ಲಿ ರೈತರು ಹಾಗೂ ಕಬ್ಬು ಬೆಳೆಗಾರರು ನಡೆಸುತ್ತಿರುವ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಭೇಟಿ ನೀಡಿ ರೈತರ ಕುಂದು-ಕೊರತೆ ಮತ್ತು ಅಹವಾಲು ಆಲಿಸಿ, ಮಾತನಾಡಿದ ಅವರು, ಸರ್ಕಾರ ಕಬ್ಬು ಬೆಳೆಗಾರರ ವಿಚಾರದಲ್ಲಿ ಅತ್ಯಂತ ಪ್ರಾಮಾಣಿಕವಾಗಿ ಪ್ರಯತ್ನ ಮಾಡಲಿದೆ ಎಂದು ಹೇಳಿದ್ದಾರೆ.

ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತಂತೆ ಸಮಗ್ರವಾಗಿ ಚರ್ಚಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಕಬ್ಬು ಬೆಳೆಗಾರರ ಸಮಗ್ರ ಬೇಡಿಕೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನಕ್ಕೆ ತಂದು ರೈತರಿಗೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಶ್ರಮಿಸಲಾಗುವುದು ಎಂದು ತಿಳಿಸಿದ್ದಾರೆ.

ಕಳೆದ ೯ ವರ್ಷಗಳಿಂದ ಕೇಂದ್ರ ಸರ್ಕಾರ ಕಬ್ಬಿನ ದರ ಪರಿಷ್ಕರಣೆ ಮಾಡಿಲ್ಲ ಎಂದು ದೂರಿದ್ದಾರೆ. ಕಾರ್ಖಾನೆಗಳು ಎಫ್.ಆರ್.ಪಿ ಪ್ರಕಾರ ನಿಗದಿತ ಅವಧಿಯೊಳಗೆ ಕಬ್ಬು ಪೂರೈಸಿರುವ ರೈತರಿಗೆ ಬಿಲ್ ಪಾವತಿಸಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ನಿಗಾ ವಹಿಸಲಿದ್ದಾರೆ ಎಂದು ಹೇಳಿದ್ದಾರೆ.

***************

ಕೆಎಂಎಫ್ ನಂದಿನಿ ತುಪ್ಪದ ದರ ಲೀಟರ್‌ಗೆ ೯೦ ರೂಪಾಯಿ ಏರಿಕೆ ಮಾಡಿದೆ. ಒಂದು ಲೀಟರ್ ನಂದಿನಿ ತುಪ್ಪಕ್ಕೆ ೭೦೦ ರೂಪಾಯಿ ದರ ನಿಗದಿ ಮಾಡಿದೆ. ಇಂದಿನಿಂದಲೇ ಪರಿಷ್ಕೃತ ದರ ಜಾರಿಯಾಗಲಿದೆ ಎಂದು ಕೆಎಂಎಫ್ ತಿಳಿಸಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್, ಒಕ್ಕೂಟಗಳ ಮನವಿ ಮೇರೆಗೆ ತುಪ್ಪದ ದರ ಇಂದು ಏರಿಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಸದ್ಯ ಬೆಣ್ಣೆ ಮತ್ತು ತುಪ್ಪಕ್ಕೆ ಬೇಡಿಕೆ ಇದೆ ಎಂದು ಹೇಳಿದ್ದಾರೆ. ಹಾಲಿನ ದರ ಏರಿಕೆ ಮಾಡಲು ಒಕ್ಕೂಟಗಳು ಮನವಿ ಮಾಡಿವೆ ಎನ್ನುವ ಮೂಲಕ ಹಾಲಿನ ದರ ಏರಿಕೆ ಬಗ್ಗೆಯೂ ಪರೋಕ್ಷ ಸುಳಿವು ನೀಡಿದ್ದಾರೆ.

***************

ಪ್ರಸ್ತುತ ಡಿಜಿಟಲ್ ಕ್ರಾಂತಿ, ಕೃತಕ ಬುದ್ಧಿಮತ್ತೆ, ಸೈಬರ್ ಕಾನೂನು, ದತ್ತಾಂಶ ರಕ್ಷಣೆ ಮತ್ತು ಅಂತಾರಾಷ್ಟ್ರೀಯ ನ್ಯಾಯ ಕ್ಷೇತ್ರಗಳಲ್ಲಿ ತ್ವರಿತ ಬದಲಾವಣೆಯಾಗುತ್ತಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ೭ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಾನೂನು ವಿದ್ಯಾರ್ಥಿಗಳು ಸಾಂಪ್ರದಾಯಿಕ ಕಾನೂನುಗಳಲ್ಲಿ ಜ್ಞಾನಗಳಿಸುವುದರ ಜೊತೆಗೆ ಸಮಕಾಲೀನ ತಾಂತ್ರಿಕ ಮತ್ತು ಜಾಗತಿಕ ಸವಾಲುಗಳನ್ನು ಅರ್ಥಮಾಡಿಕೊಳ್ಳುವಲ್ಲಿ ಮುಂಚೂಣಿಯಲ್ಲಿರುವುದು ಅತ್ಯಗತ್ಯವಾಗಿದೆ ಎಂದು ಸಲಹೆ ನೀಡಿದ್ದಾರೆ.

ವಿದ್ಯಾರ್ಥಿಗಳು ನ್ಯಾಯ ವ್ಯವಸ್ಥೆಯನ್ನು ಹೆಚ್ಚು ಪಾರದರ್ಶಕ ಮತ್ತು ಸುಲಭವಾಗಿಸಬೇಕು ಎಂದು ಕರೆ ನೀಡಿದ್ದಾರೆ.

ಧ್ವನಿ : ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಘಟಿಕೋತ್ಸವದಲ್ಲಿ ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹಾಗೂ ಪ್ರಸ್ತುತ ಆಂಧ್ರಪ್ರದೇಶದ ರಾಜ್ಯಪಾಲ ಎಸ್.ಅಬ್ದುಲ್ ನಜೀರ್ ಹಾಗೂ ಹಿರಿಯ ನ್ಯಾಯವಾದಿ ಎಸ್.ವಿ.ಸುದೇಶ ಪೈ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು. ಕಾನೂನು ಸಚಿವ ಎಚ್.ಕೆ.ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

***************

ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆ-೧, ಪರೀಕ್ಷೆ-೨ ಅಂತಿಮ ವೇಳಾಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧ ಮಾರ್ಚ್ ೧೮ ರಿಂದ ಏಪ್ರಿಲ್ ೨ರವರೆಗೆ ನಡೆಯಲಿದೆ. ಪಿಯುಸಿ ಪರೀಕ್ಷೆ-೧ ೨೦೨೬ರ ಫೆಬ್ರವರಿ ೨೮ ರಿಂದ ಮಾರ್ಚ್ ೧೭ರವರೆಗೆ ಹಾಗೂ ಪಿಯುಸಿ ಪರೀಕ್ಷೆ-೨ ಏಪ್ರಿಲ್ ೨೫ ರಿಂದ ಮೇ ೯ವರೆಗೆ ನಡೆಯಲಿದೆ.

ರಾಜ್ಯದ ಎಲ್ಲಾ ಪದವಿಪೂರ್ವ ಕಾಲೇಜುಗಳಲ್ಲಿ ಹಾಗೂ ಪ್ರೌಢಶಾಲೆಯಲ್ಲಿ ತಮ್ಮ ಶಾಲಾ ಕಾಲೇಜುಗಳ ಪ್ರಕಟಣಾ ಫಲಕದಲ್ಲಿ ವೇಳಾಪಟ್ಟಿಯನ್ನು ಪ್ರಕಟಿಸಿ ಮಾಹಿತಿ ನೀಡಲು ಪರೀಕ್ಷಾ ಮಂಡಳಿ ತಿಳಿಸಿದೆ.

***************

ಅನಾರೋಗ್ಯದ ಹಿನ್ನೆಲೆಯಲ್ಲಿ ನಿನ್ನೆ ನಿಧನ ಹೊಂದಿದ ಶಾಸಕ ಎಚ್.ವೈ.ಮೇಟಿ ಅಂತ್ಯ ಸಂಸ್ಕಾರ ಹುಟ್ಟೂರಾದ ತಿಮ್ಮಾಪುರದಲ್ಲಿಂದು ನಡೆಯಿತು. ಸಕಲ ಸರ್ಕಾರಿ ಗೌರವಗಳೊಂದಿಗೆ ಹಿಂದು ಕುರುಬ ಸಂಪ್ರದಾಯದಂತೆ ಅಂತಿಮ ವಿಧಿವಿಧಾನ ನೆರವೇರಿತು.

ಪೊಲೀಸರು ಮೂರು ಸುತ್ತು ಕುಶಾಲತೋಪು ಸಿಡಿಸಿ ಗೌರವ ಸಲ್ಲಿಸಿ ಮೇಟಿ ಪುತ್ರರಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಂಪುಟ ಸಚಿವರು, ಮಾಜಿ ಸಚಿವರು. ಶಾಸಕರು, ವಿರೋಧ ಪಕ್ಷದ ನಾಯಕರು ಸಹಸ್ರಾರು ಕಾರ್ಯಕರ್ತರು, ಅಭಿಮಾನಿಗಳು ಅಂತಿಮ ನಮನ ಸಲ್ಲಿಸಿದರು.

***************

ನಾಳೆ ೧೧ನೇ ಭಾರತೀಯ ತೋಟಗಾರಿಕೆ ಕಾಂಗ್ರೆಸ್ ಮತ್ತು ಅಂತಾರಾಷ್ಟ್ರೀಯ ಸಭೆ - ೨೦೨೫ ಬೆಂಗಳೂರಿನ ಜಿಕೆವಿಕೆ ಕ್ಯಾಂಪಸ್‌ನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ.

ಭಾರತೀಯ ತೋಟಗಾರಿಕೆ ವಿಜ್ಞಾನ ಅಕಾಡೆಮಿ ಆಶ್ರಯದಲ್ಲಿ ಬೆಂಗಳೂರಿನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಬಾಗಲಕೋಟೆಯ ತೋಟಗಾರಿಕೆ ವಿಶ್ವವಿದ್ಯಾಲಯ ಹಾಗೂ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿಜ್ಞಾನಿಗಳು, ಉದ್ಯಮಿಗಳು, ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ರೈತ ಪ್ರತಿನಿಧಿಗಳು ಭಾಗವಹಿಸಲಿದ್ದು, ೧೧ ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ. ಸಮ್ಮೇಳನದಲ್ಲಿ ವಿಕಸಿತ ಭಾರತದ ದೃಷ್ಟಿಕೋನಕ್ಕೆ ಕೊಡುಗೆ ನೀಡುವ ಪ್ರಮುಖ ಕ್ಷೇತ್ರಗಳ ಕುರಿತಂತೆ ಚರ್ಚೆ ನಡೆಯಲಿದೆ. ವಿವಿಧ ತೋಟಗಾರಿಕೆ ಸಂಸ್ಥೆಗಳು, ವಿಶ್ವವಿದ್ಯಾಲಯಗಳು ಹಾಗೂ ಕೈಗಾರಿಕೆಗಳನ್ನು ಪ್ರತಿನಿಧಿಸುವ ೨೫ ಮಳಿಗೆಗಳನ್ನು ಹೊಂದಿರುವ ಹಾರ್ಟ್-ಎಕ್ಸ್‌ಪೋ ನಡೆಯಲಿದೆ.

ಅಲ್ಲದೇ ತೋಟಗಾರಿಕೆಯ ವಿವಿಧ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಿದ ಅತ್ಯುತ್ತಮ ವಿಜ್ಞಾನಿಗಳು, ಉದ್ಯಮಿಗಳು ಹಾಗೂ ಪ್ರಗತಿಪರ ರೈತರ ಸನ್ಮಾನ ಕಾರ್ಯಕ್ರಮ ನಡೆಯಲಿದೆ.

***************

ಯಾವುದೇ ರೀತಿಯ ವಿಪತ್ತುಗಳು ಸಂಭವಿಸಿದಾಗ ಗೋಲ್ಡನ್ ಅವರ್ ನಲ್ಲಿ ಸ್ಪಂದಿಸುವ ಮೂಲಕ ಹಲವು ಮಂದಿಯ ಜೀವ ಉಳಿಸಲು ಸಾಧ್ಯ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ.

ಕೈಗಾದಲ್ಲಿ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಜಿಲ್ಲಾಡಳಿತ, ಅಣು ಉತ್ಪಾದನಾ ಕೇಂದ್ರ ಕೈಗಾ ಹಾಗೂ ವಿಪತ್ತು ಸಿದ್ಧತೆ, ಚೇತರಿಕೆ ಮತ್ತು ಸಂಶೋಧನಾ ಕೇಂದ್ರ ಸಂಯುಕ್ತ ಆಶ್ರಯದಲ್ಲಿ ನಡೆದ ಸಮಯ್ ರೇಖಾ ೨೦೨೫ ಸಮ್ಮೇಳನದಲ್ಲಿ ಅವರು ಮಾತನಾಡಿದರು.

ಇದಕ್ಕಾಗಿ ವೈದ್ಯಕೀಯ ವ್ಯವಸ್ಥೆ, ವಾಹನಗಳು ಸೇರಿದಂತೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿರಬೇಕು ಎಂದು ನಿರ್ದೇಶನ ನೀಡಿದ್ದಾರೆ.

ದೇಶದಲ್ಲಿ ಪ್ರಾಕೃತಿಕ ವಿಕೋಪಗಳಿಗೆ ಒಳಗಾಗುವ ಪ್ರದೇಶಗಳ ಪಟ್ಟಿಯಲ್ಲಿ ಉತ್ತರ ಕನ್ನಡ ಜಿಲ್ಲೆ ಪಟ್ಟಿಯಲ್ಲಿ ೨ನೇ ಸ್ಥಾನದಲ್ಲಿದೆ. ಕೈಗಾ ಅಣು ಸ್ಥಾವರ, ರಾಸಾಯನಿಕ ಕಾರ್ಖಾನೆ, ಅಣೆಕಟ್ಟುಗಳು, ನೌಕಾ ನೆಲೆಯಂತಹ  ಸೂಕ್ಷ್ಮ ಪ್ರದೇಶಗಳಿದ್ದು, ಈ ಪ್ರದೇಶಗಳ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ವಿಪತ್ತುಗಳು ಸಂಭವಿಸಿದಾಗ ತಕ್ಷಣ ರಕ್ಷಣಾ ಕಾರ್ಯಚರಣೆ ಕೈಗೊಳ್ಳಲು ಎಲ್ಲಾ ಮುನ್ನೆಚ್ಚರಿಕೆ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

***************

ಕೊಡಗು ಮೂಲದ ಯುವಪೀಳಿಗೆ ಮತ್ತೆ ಜಿಲ್ಲೆಗೆ ಮರಳುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಸಂಬಂಧಿತ ಯೋಜನೆಗಳು ಪ್ರಮುಖ ಪಾತ್ರ ವಹಿಸಲಿದೆ ಎಂದು ಜಿಲ್ಲಾಧಿಕಾರಿ ವೆಂಕಟರಾಜಾ ಅಭಿಪ್ರಾಯಪಟ್ಟಿದ್ದಾರೆ.

ಮಡಿಕೇರಿಯಲ್ಲಿ ಕೊಡಗು ಪ್ರವಾಸೋದ್ಯಮ ಇಲಾಖೆ ಕಛೇರಿಯಲ್ಲಿ ಕೂರ್ಗ್ ರೆಸಾರ್ಟ್, ಹೋಟೇಲ್ ಅಸೋಸಿಯೇಷನ್‌ನ ನೂತನ ಕಛೇರಿ ಉದ್ಘಾಟಿಸಿ ಮಾತನಾಡಿದ ಅವರು, ಉದ್ಯೋಗವಕಾಶ ಅರಸಿ ಹೊರನಾಡಿಗೆ ತೆರಳಿರುವ ಕೊಡಗಿನ ಅನೇಕ ಯುವಕ, ಯುವತಿಯರು ಮತ್ತೆ ಕೊಡಗಿಗೆ ಮರಳಲು ಸ್ಥಳೀಯವಾಗಿ ಪ್ರವಾಸೋದ್ಯಮ ಚಟುವಟಿಕೆಗಳು ಸಹಕಾರಿಯಾಗಬೇಕು ಎಂದು ತಿಳಿಸಿದ್ದಾರೆ.

********ಮುಕ್ತಾಯ*******